ಶ್ರೀ ಕೆ. ಜಯಪ್ರಕಾಶ್ ಹೆಗ್ಡೆ: ಎಲ್ಲವನ್ನೂ ಸಿ.ಬಿ.ಐ. ತನಿಖೆಗೆ ಕೊಟ್ಟು ಬಿಡಿ ಏನಾಗುತ್ತದೆ?

ಶ್ರೀ ವಾಟಾಳ್ ನಾಗರಾಜ್: ಮಾನ್ಯ ಅಧ್ಯಕ್ಷರೆ, ಸಿ.ಬಿ.ಐ. ತನಿಖೆ ಒತ್ತಾಯಿಸಿ ನಾನೂ ಸಭಾತ್ಯಾಗ ಮಾಡುತ್ತಿದ್ದೇನೆ.

ಶ್ರೀ ಕೆ.ಜಯಪ್ರಕಾಶ್ ಹೆಗ್ಡೆ: ನಾನೂ ಸಭಾತ್ಯಾಗ ಮಾಡುತ್ತೇನೆ.

(ಈ ಹಂತದಲ್ಲಿ ಮಾನ್ಯ ಸದಸ್ಯರಾದ ಶ್ರೀ ವಾಟಾಳ್ ನಾಗರಾಜ್ ಮತ್ತು ಶ್ರೀ ಕೆ.ಜಯಪ್ರಕಾಶ್ ಹೆಗ್ಡೆಯವರು ಸಭಾತ್ಯಾಗ ಮಾಡಿದರು)

ಅಧ್ಯಕ್ಷರು: ಈಗ ಪೂರಕ ಕಾರ್ಯಕಲಾಪಗಳ ಪಟ್ಟಿ ಕಲಾಪಗಳನ್ನು ತೆಗೆದುಕೊಳ್ಳುತ್ತೇನೆ. ಮೊದಲಿಗೆ, ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು.

16. ಸಭೆಯ ಮುಂದಿಡಲಾದ ಕಾಗದ ಪತ್ರಗಳು :

ಶ್ರೀ ಡಿಸೋಜ ರಾಬಿನ್‌ಸನ್, ಪ್ರಧಾನ ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಮಂಡಲ:– ಮಾನ್ಯ ಸಭಾಧ್ಯಕ್ಷರೆ, ವಿಧಾನ ಪರಿಷತ್ತಿನಿಂದ ತಿರಸ್ಕೃತಗೊಂಡ 2006ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ಸಂಖ್ಯೆ 3) ವಿಧೇಯಕವನ್ನು ಸಭೆಯ ಮುಂದಿಡುತ್ತೇನೆ.

ಅಧ್ಯಕ್ಷರು: ಮಂಡಿಸಲಾಯಿತು.

17. ವಿತ್ತೀಯ ಕಾರ್ಯಕಲಾಗಳು

ಶಾಸನ ರಚನೆ :

(1) ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಪುನರ್ ಪರ್ಯಾಲೋಚನಾ ಪ್ರಸ್ತಾವ

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, ವಿಧಾನ ಪರಿಷತ್ತಿನಿಂದ ತಿರಸ್ಕೃತಗೊಂಡ 2006ನೇ ಸಾಲಿನ ಧನ ವಿನಿಯೋಗ (ಸಂಖ್ಯೆ 3) ವಿಧೇಯಕವನ್ನು ಪುನರ್ ಪರ್ಯಾಲೋಚಿಸ ಬೇಕೆಂದು ಕೋರುತ್ತೇನೆ".

ಅಧ್ಯಕ್ಷರು: ಪ್ರಸ್ತಾವ ಏನೆಂದರೆ:–

"ವಿಧಾನ ಪರಿಷತ್ತಿನಿಂದ ತಿರಸ್ಕೃತಗೊಂಡ 2006ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ಸಂಖ್ಯೆ 3) ವಿಧೇಯಕವನ್ನು ಪುನರ್ ಪರ್ಯಾಲೋಚಿಸುವುದು"